RNU AIR DHARWAD

# MAY 28, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- **ಸರ್ಕಾರ ಕನ್ನಡ ಭಾ ೆ** ನಿರ್ಲಕ್ಷಿಸುತ್ತಿದೆ ಎನ್ನುವ ಆರೋಪದಲ್ಲಿ ಹುರುಳಿಲ್ಲ– ಮುಖ್ಯಮಂತ್ರಿ ಸಿದ್ದರಾಮಯ್ಯ.

- **ರಾಜ್ಯದಲ್ಲಿನ** ಯಾವುದೇ ಸಾರ್ವಜನಿಕ ಉದ್ಯಮ ಸ್ಥಳಾಂತರಕ್ಕೆ ಅವಕಾಶ ಇಲ್ಲ– ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್.

- **ಕೋವಿಡ್ ನಿಯಂತ್ರಣ** ಕುರಿತು ಅಧಿಕಾರಿಗಳೊಂದಿಗೆ ವೈದ್ಯಕೀಯ ಶಿಕ್ಷಣ ಖಾತೆ ಸಚಿವರ ಸಭೆ: ಅಗತ್ಯ ಸೂಚನೆ.

- **ರಾಜ್ಯಾದ್ಯಂತ ಕಡಿಮೆಗೊಂಡ** ಮಳೆ ಬಿರುಸು: ಜಿಲ್ಲಾಡಳಿತಗಳಿಂದ ಹಲವು ಮುನ್ನೆಚ್ಚರಿಕಾ ಕ್ರಮ.

**ಈಗ ವಾರ್ತೆಗಳ ವಿವರ**

*******

**ಸರ್ಕಾರ ಕನ್ನಡ ಭಾ** ೆ ನಿರ್ಲಕ್ಷಿಸುತ್ತಿದೆ ಎನ್ನುವ ವಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಸಂದೇಶ ನೀಡಿರುವ ಅವರು, ಪ್ರಸ್ತುತ **ಸಾಲಿನಲ್ಲಿ** ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ 34 ಸಾವಿರದ 438 ಕೋಟಿ ಮತ್ತು ಸಮಾಜ ಕಲ್ಯಾಣ ಮತ್ತಿತರ ಇಲಾಖೆಗಳಿಗೆ ಸೇರಿದ ಶಾಲೆಗಳಿಗೆ 4 ಸಾವಿರದ 150 ಕೋಟಿ ಹೀಗೆ ಕನ್ನಡ ಭಾ ೆಯ ಶಾಲೆಗಳಿಗಾಗಿಯೇ ರಾಜ್ಯ ಸರ್ಕಾರ ಒಟ್ಟು 38,688 ಕೋಟಿ ರೂಪಾಯಿಗಳನ್ನು ನೀಡಿದೆ ಎಂದು ಮಾಹಿತಿ ನೀಡಿದ್ದಾರೆ. ಇದರ ಜೊತೆಯಲ್ಲಿ ಸರ್ಕಾರಿ ಶಾಲೆಗಳ ನಿರ್ವಹಣೆ ಮತ್ತು ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕಾಗಿ ಒಟ್ಟು 999.30 ಕೋಟಿ ರೂಪಾಯಿಗಳ ಅನುದಾನ ಒದಗಿಸಲಾಗಿದೆ ಹೀಗಿರುವಾಗ ಕನ್ನಡ ಭಾ ೆಗೆ ರಾಜ್ಯ ಸರ್ಕಾರ ಕೇವಲ 32 ಕೋಟಿ ರೂಪಾಯಿ ಅನುದಾನ ನೀಡುತ್ತಿದೆ ಎಂಬ ವಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

*******

**ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ** ಯಾವುದೇ ಸಾರ್ವಜನಿಕ ಉದ್ಯಮವನ್ನು ಸ್ಥಳಾಂತರ ಮಾಡಲು ಅವಕಾಶ ಮಾಡಿಕೊಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಎಚ್.ಎ.ಎಲ್. ಸ್ಥಳಾಂತರಕ್ಕೆ ಮನವಿ ಮಾಡಿದ್ದಾರೆ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು, ಎಚ್.ಎ.ಎಲ್. ಎರಡು ವಿಮಾನ ನಿಲ್ದಾಣಗಳನ್ನು ಹೊಂದಿದೆ. ಹೆಲಿಕಾಪ್ಟರ್ ಘಟಕವೂ ಕಾರ್ಯನಿರ್ವಹಿಸುತ್ತಿದೆ. ವಿಸ್ತರಣೆಗೆ ಅಗತ್ಯವಿದ್ದರೇ ಜಮೀನು ಸೇರಿದಂತೆ ಇನ್ನಿತರೆ ಮೂಲಸೌಲಭ್ಯವನ್ನು ನೀಡಲು ಸರ್ಕಾರ ಸಿದ್ಧವಿದೆ. ಹೀಗಾಗಿ ಎಚ್.ಎ.ಎಲ್. ಸೇರಿದಂತೆ ಯಾವುದೇ ಸಾರ್ವಜನಿಕ ಉದ್ಯಮ ಸ್ಥಳಾಂತರಕ್ಕೆ ಅನುವು ಮಾಡಿಕೊಡುವುದಿಲ್ಲ ಎಂದು ಸಚಿವರು ಹೇಳಿದರು.

*******

**ಅಕ್ರಮ ಕೃಷಿ ಪಂಪ್‌ಸೆಟ್ ಗಳನ್ನು** ಸಕ್ರಮಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ನವೀಕೃತ ಶೀಘ್ರ ಸಂಪರ್ಕ ಯೋಜನೆ ಜಾರಿಗೆ ತಂದಿದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ಹೇಳಿದ್ದಾರೆ. ರಾಮನಗರದಲ್ಲಿ ನಿನ್ನೆ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯ ಜನ ಪ್ರತಿನಿಧಿಗಳು ಮತ್ತು ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ರೈತರು ಸ್ವಯಂ ಮೂಲ ಸೌಕರ್ಯ ಕಲ್ಪಿಸಿಕೊಂಡರೆ ಎಸ್ಕಾಂ ವತಿಯಿಂದ ಟ್ರಾನ್ಸ್ ಫಾರ್ಮರ್ ಒದಗಿಸಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲಾಗುವುದು ಎಂದರು.

*******

**ಚಿಕ್ಕೋಡಿ ಹಾಗೂ ಬೆಳಗಾವಿ** ಶೈಕ್ಷಣಿಕ ಜಿಲ್ಲೆಗಳ ಶಾಲೆ ಮತ್ತು ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿಗೆ ಪ್ರತಿವ ್ ಲೋಕೋಪಯೋಗಿ ಇಲಾಖೆಯಿಂದ ಪ್ರತ್ಯೇಕವಾಗಿ ಐದು ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದು ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದ್ದಾರೆ. ಸಿಇಟಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಿ ಮಾತನಾಡಿದ ಅವರು, ಬಡವರ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಬೇಕಾದರೆ ಉತ್ತಮ ಮೂಲ ಸೌಕರ್ಯ ಒದಗಿಸುವುದು ಸರಕಾರದ ಕರ್ತವ್ಯ ಎಂದು ಅವರು ಹೇಳಿದರು.

*******

**ಬೀದರ ಜಿಲ್ಲೆಯ ಸ್ಥಳೀಯ** ಸಂಸ್ಥೆಗಳ ಅಭಿವೃದ್ಧಿಗೆ ಹೆಚ್ಚುವರಿಯಾಗಿ 250 ಕೋಟಿ ಹಣ ನೀಡಲಾಗಿದೆ ಎಂದು ಪೌರಾಡಳಿತ ಹಾಗೂ ಹಜ್ ಖಾತೆ ಸಚಿವ ರಹೀಂಖಾನ್ ತಿಳಿಸಿದ್ದಾರೆ. ಬೀದರನಲ್ಲಿ ನಿನ್ನೆ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆ ಹಂತ–4 ರಡಿ ಅನೇಕ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದ್ದು ಅದರಲ್ಲಿ ಭಾಗಶಃ ಪೂರ್ಣಗೊಂಡಿವೆ. ಇನ್ನು ಕೆಲವು ಕಾರ್ಯ ಪ್ರಗತಿಯಲ್ಲಿವೆ ಎಂದು ಹೇಳಿದರು.

*******

**ಕೋವಿಡ್ ನಿಯಂತ್ರಣ ಕುರಿತಂತೆ** ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಶರಣ ಪ್ರಕಾಶ ಪಾಟೀಲ್ ಅವರು ಅಧಿಕಾರಿಗಳೊಂದಿಗೆ ಬೆಂಗಳೂರಿನ ವಿಕಾಸಸೌಧದಲ್ಲಿ ಮುನ್ನೆಚ್ಚರಿಕಾ ಸಭೆ ನಡೆಸಿ, ಅಗತ್ಯ ಸೂಚನೆಗಳನ್ನು ನೀಡಿದರು. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ರಾಜ್ಯದಲ್ಲಿ ಕೊರೊನಾ ಪ್ರಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವೈದ್ಯರು, ಆರೋಗ್ಯ ಸಿಬ್ಬಂದಿಗಳಿಗೆ ಮಾಸ್ಕ್ ಧರಿಸಲು ಸೂಚಿಸಲಾಗಿದೆ. ಸೋಂಕು ನಿಯಂತ್ರಣಕ್ಕೆ ಈಗಾಗಲೇ ರಾಜ್ಯ ಸರ್ಕಾರ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಂಡಿದ್ದು, ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

*******

**ರಾಜ್ಯದಲ್ಲಿ ವ್ಯಾಪಕವಾಗಿ** ಮಳೆಯಾಗುತ್ತಿದ್ದು, ಸಾಂಕ್ರಾಮಿಕ ರೋಗಗಳ ಜೊತೆಯಲ್ಲಿ ಕೋವಿಡ್ ಪ್ರಕರಣಗಳು ಪತ್ತೆಯಾಗುತ್ತಿರುವುದರ ಬಗ್ಗೆ ಅಲ್ಲಲ್ಲಿ ವರದಿಯಾಗುತ್ತಿವೆ. ಹಾವೇರಿ ಜಿಲ್ಲೆಯಲ್ಲಿ ಅಗತ್ಯ ಆರೋಗ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಸೂಚನೆ ನೀಡಿದ್ದಾರೆ.

*******

**ಸಾವಿರಾರು ವರ್ಷಗಳ** ಇತಿಹಾಸವಿರುವ ಕನ್ನಡ ಅತ್ಯಂತ ವೈವಿಧ್ಯಮಯ ಭಾಷೆಯಾಗಿದೆ ಎಂದು ಉನ್ನತ ಶಿಕ್ಷಣ ಸಚಿವರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಹೇಳಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ 17.83 ಕೋಟಿ ರೂಪಾಯಿ ವೆಚ್ಚದ ಕನ್ನಡ ಭವನ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಕನ್ನಡ ಭಾಷೆ ಮತ್ತು ಸಾಹಿತ್ಯ ಅತ್ಯಂತ ಶ್ರೀಮಂತ ಪರಂಪರೆ, ಸಮನ್ವಯತೆಯ ಗುಣ ಹೊಂದಿದೆ. ಅತ್ಯಾಧುನಿಕ ಸೌಕರ್ಯಗಳೊಂದಿಗೆ ಸುಸಜ್ಜಿತವಾಗಿ ನಿರ್ಮಾಣವಾಗಿರುವ ಕನ್ನಡ ಭವನ ಆಂಧ್ರದ ಗಡಿಭಾಗದಲ್ಲಿ ಹತ್ತು ಹಲವು ಕನ್ನಡ ಕಾರ್ಯಕ್ರಮಗಳ ಮೂಲಕ ಕನ್ನಡದ ಕಂಪನ್ನು ಪಸರಿಸಲು ಸಹಕಾರಿಯಾಗಲಿದೆ ಎಂದರು.

*******

**ಕಳೆದ ಕೆಲವು ದಿನಗಳಿಂದ ರಾಜ್ಯದ್ಯಂತ ಸುರಿಯುತ್ತಿರುವ**ಮಳೆಯಿಂದ ರಾಜ್ಯದಲ್ಲಿ ಕೃಷಿ ಚಟುವಟಿಕೆಗಳು ಗರಿಗೆದರಿದ್ದು,ರೈತರು ಭೂಮಿ ಹದ ಮಾಡುವ ಕಾರ್ಯದಲ್ಲಿ ನಿರತರಾಗಿದ್ದಾರೆ. ಈ ಸಂದರ್ಭದಲ್ಲಿ ಸಂಯುಕ್ತ ರಸಗೊಬ್ಬರಗಳ ಬಳಕೆ ಮತ್ತು ಪ್ರಯೋಜನ ಕುರಿತು ವಿಜಯನಗರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಶರಣಪ್ಪ ಮುದ್ಗಲ್ ರೈತರಿಗೆ ಮಾಹಿತಿ ನೀಡಿದ್ದಾರೆ.

*******

**ಮಳೆ ಹಾನಿ ಹಾಗೂ ಭೂಕುಸಿತ** ಉಂಟಾಗಿರುವ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ವಿವಿಧ ಪ್ರದೇಶಗಳಿಗೆ ವಿಪಕ್ಷ ನಾಯಕ ಆರ್. ಅಶೋಕ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಮಳೆಗಾಲಕ್ಕೂ ಮುನ್ನವೇ ಸರ್ಕಾರ ಪರಿಹಾರ ಕ್ರಮಗಳನ್ನು ಘೋಷಿಸಬೇಕಿತ್ತು. ಆದರೆ, ಸರ್ಕಾರದ ಖಜಾನೆ ಖಾಲಿಯಾಗಿದ್ದು, ಯಾವುದೇ ಕೆಲಸ ಆಗುತ್ತಿಲ್ಲ ಎಂದರು. ಮಂಗಳೂರು, ರಾಯಚೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆಯಿಂದ ಉಂಟಾದ ಸಮಸ್ಯೆಗಳಿಗೆ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ. ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಪರಿಹಾರ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

*******

**ಕಳೆದ ಕೆಲವು ದಿನಗಳಿಂದ ರಾಜ್ಯಾದ್ಯಂತ ಸುರಿಯುತ್ತಿದ್ದ** ಮಳೆಯ ಬಿರುಸು ಕಡಿಮೆಯಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲಾಡಳಿತಗಳು ಹಲವು ಕ್ರಮಗಳನ್ನು ಕೈಗೊಂಡಿವೆ. **ಮಹಾರಾ ್ಟ್ರದಾದ್ಯಂತ** ಭಾರಿ ಮಳೆಯಾಗುತ್ತಿದ್ದು, ಕೃ ್ಣಾ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚುತ್ತಿದೆ. ನದಿ ಪಾತ್ರದ ಜನತೆಗೆ ಎಚ್ಚರಿಕೆಯಿಂದ ಇರಲು ಸೂಚಿಸಲಾಗಿದೆ. **ಇತ್ತೀಚಿಗೆ ಬೆಂಗಳೂರು** ಗ್ರಾಮಾಂತರ ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುತ್ತಿರುವ ಹಿನ್ನಲೆ, ಯಾವುದೇ ರೀತಿಯ ಜೀವಹಾನಿ ಆಗಬಾರದು ಹಾಗೂ ಜಾನುವಾರುಗಳನ್ನು ರಕ್ಷಿಸುವ ಸಲುವಾಗಿ ಜಿಲ್ಲೆಯಲ್ಲಿ ಸಹಾಯವಾಣಿ ತೆರೆಯಲಾಗಿದೆ. **ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆ** ಕಡಿಮೆಯಾಗಿದೆ. ಆದರೆ ಕಡಲು ಪ್ರಕ್ಷುಬ್ಧವಾಗಿದ್ದು, ಮಂಗಳೂರು ಹೊರವಲಯದ ಉಳ್ಳಾಲ, ಸೋಮೇಶ್ವರ, ಉಚ್ಚಿಲ ಪ್ರದೇಶದಲ್ಲಿ ಕಡಲ್ಕೊರೆತ ತೀವ್ರಗೊಂಡಿದೆ. ಅಪಾಯದಂಚಿನಲ್ಲಿರುವ ಜನರನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದ್ದು, ಅಗತ್ಯ ಬಿದ್ದಲ್ಲಿ ಕಡಲ್ಕೊರೆತ ಸಂತ್ರಸ್ತರಿಗೆ ಗಂಜಿ ಕೇಂದ್ರಗಳನ್ನು ತೆರೆಯಲು ಪುರಸಭೆ ಸಿದ್ಧತೆ ಮಾಡಿಕೊಂಡಿದೆ. **ಪ್ರಸಕ್ತ ಸಾಲಿನ ಮುಂಗಾರು ಮಳೆ** ಸಂದರ್ಭವನ್ನು ಸಮರ್ಪಕವಾಗಿ ನಿರ್ವಹಿಸಲು, ಉಡುಪಿ ನಗರಸಭಾ ವ್ಯಾಪ್ತಿಯ 35 ವಾರ್ಡಗಳಲ್ಲಿ ಸಹಾಯವಾಣಿ ಆರಂಭಿಸಲಾಗಿದ್ದು, ನೋಡೆಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

*******

## ಸಂಕ್ಷಿಪ್ತ ಸುದ್ದಿಗಳು

**ನವದೆಹಲಿಯ ರಾ ್ಟ್ರಪತಿ ಭವನದಲ್ಲಿ** ನಿನ್ನೆ ನಡೆದ ಕಾರ್ಯಕ್ರಮದಲ್ಲಿ ಕನ್ನಡದ ಹಿರಿಯ ನಟ ಅನಂತ್‌ನಾಗ್, ಬಾಗಲಕೋಟೆಯ ಖ್ಯಾತ ಗೋಂಧಳಿ ಕಲಾವಿದ ಡಾಕ್ಟರ್ ವೆಂಕಪ್ಪ ಅಂಬಾಜಿ ಸುಗತೇಕರ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪದ್ಮಶ್ರೀ ಪ್ರಶಸ್ತಿ ಸ್ವೀಕರಿಸಿದರು.

**ಸಾರ್ವಜನಿಕರ ಉಪಯೋಗಕ್ಕಾಗಿ** ರಾಜ್ಯದಲ್ಲಿ ಜಿಲ್ಲೆಗೆ ಒಂದು ಉಪನೋಂದಣಾಧಿಕಾರಿಗಳ ಕಚೇರಿಯು 2 ಮತ್ತು 4ನೇ ಶನಿವಾರ ಹಾಗೂ ಎಲ್ಲಾ ಭಾನುವಾರಗಳಂದು ಕಾರ್ಯನಿರ್ವಹಿಸಲು ಸರ್ಕಾರ ಆದೇಶ ಹೊರಡಿಸಿದೆ.

**ಕಾರ್ಮಿಕರಿಗಾಗಿ ಸಂಚಾರಿ** ಆರೋಗ್ಯ ಕ್ಲಿನಿಕ್ ಯೋಜನೆಯಡಿ ಮೂರು ವಾಹನಗಳನ್ನು ಧಾರವಾಡದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋ ್ ಲಾಡ್ ಹಸಿರು ಬಾವುಟ ತೋರಿಸುವ ಮೂಲಕ ಚಾಲನೆ ನೀಡಿದರು.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಸರ್ಕಾರ ಕನ್ನಡ ಭಾ ೆ** ನಿರ್ಲಕ್ಷಿಸುತ್ತಿದೆ ಎನ್ನುವ ವಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ– ಮುಖ್ಯಮಂತ್ರಿ ಸಿದ್ದರಾಮಯ್ಯ.

**ರಾಜ್ಯದಲ್ಲಿನ** ಯಾವುದೇ ಸಾರ್ವಜನಿಕ ಉದ್ಯಮ ಸ್ಥಳಾಂತರಕ್ಕೆ ಅವಕಾಶ ಇಲ್ಲ– ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್.

**ಕೋವಿಡ್ ನಿಯಂತ್ರಣ** ಕುರಿತು ಅಧಿಕಾರಿಗಳೊಂದಿಗೆ ವೈದ್ಯಕೀಯ ಶಿಕ್ಷಣ ಖಾತೆ ಸಚಿವರ ಸಭೆ: ಅಗತ್ಯ ಸೂಚನೆ.

**ರಾಜ್ಯಾದ್ಯಂತ ಕಡಿಮೆಗೊಂಡ** ಮಳೆ ಬಿರುಸು: ಜಿಲ್ಲಾಡಳಿತಗಳಿಂದ ಹಲವು ಮುನ್ನೆಚ್ಚರಿಕಾ ಕ್ರಮ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**
*****END*****